157 Neg = (117)
4KK
020126

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಧು ಜಿ. ಮಾದೇಗೌಡ ರವರ ನಿಯಮ 72 ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆ ಸಂಖ್ಯೆ 117 ಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ :**

ಸಾರ್ವಜನಿಕರಿಗೆ ಶುದ್ಧೀಕರಿಸಿದ ನೀರನ್ನು ಒದಗಿಸುವ ಉದ್ದೇಶದಿಂದ ಸ್ಥಾಪಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಗ್ರಾಮ ಪಂಚಾಯಿತಿಗಳಿಗೆ ಹಸ್ತಾಂತರಿಸಲಾಗುತ್ತಿದ್ದು, ನಿರ್ವಹಣೆಯಲ್ಲಿ ಕೊರತೆ, ನಿರ್ವಹಣಾ ನಿಧಿಯ ಕೊರತೆ, ಸಕಾಲಕ್ಕೆ ದುರಸ್ತಿ ಆಗದಿರುವುದರಿಂದ ರಾಜ್ಯದಾದ್ಯಂತ ಅಂದಾಜು 2,900ಕ್ಕಿಂತಲೂ ಹೆಚ್ಚಿನ ಘಟಕಗಳು ಸ್ಥಗಿತಗೊಂಡಿದ್ದು ಸ್ಮಾರಕಗಳಂತಾಗಿವೆ. ಎಲ್ಲಾ ಜಿಲ್ಲೆಗಳಲ್ಲೂ ಇದೇ ಪರಿಸ್ಥಿತಿ ಇದೆ. ಆದ್ದರಿಂದ, ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ, ದುರಸ್ತಿ ಕೆಲಸಗಳನ್ನು ನಿರ್ವಹಿಸಲು ಹಾಗೂ ಪ್ರತಿ ಜಿಲ್ಲೆಯಲ್ಲೂ ನಿರ್ವಹಣಾ ಸಂಸ್ಥೆಯನ್ನು ಗುರುತಿಸಿ ನಿರ್ವಹಿಸುವ ಮೂಲಕ ಸಾರ್ವಜನಿಕರಿಗೆ ಆಗುವ ಅನನುಕೂಲದ ಬಗ್ಗೆ ನಿಯಮ 72ರ ಅಡಿಯಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸುವ ಉದ್ದೇಶದಿಂದ ಒಟ್ಟು 19,410 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದ್ದು, ಪ್ರಸ್ತುತ 16,265 ಘಟಕಗಳು ಸುಸ್ಥಿತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಘಟಕಗಳ ನಿರ್ವಹಣೆಗಾಗಿ (O&M), ಗುತ್ತಿಗೆ ಅವಧಿ ಮುಗಿದ ನಂತರ ಇಲಾಖೆಯ ವತಿಯಿಂದ ಟೆಂಡರ್ ಪಡೆದ ಗುತ್ತಿಗೆದಾರರಿಗೆ ಅಥವಾ ನಿರ್ವಹಣೆ ಹೊತ್ತ ಗ್ರಾಮ ಪಂಚಾಯಿತಿಗಳಿಗೆ ಮಾಹೆಯಾನ ರೂ.3,000/- ಗಳಂತೆ ಅನುದಾನ ನೀಡಲಾಗುತ್ತಿದೆ. ಇದಲ್ಲದೇ, ಸಾರ್ವಜನಿಕರಿಗೆ ನೀರಿನ ಮಾರಾಟದಿಂದ ಸಂಗ್ರಹವಾಗುವ ಮೊತ್ತವನ್ನು ಸೇರಿದಂತೆ ಸಂಬಂಧಿಸಿದ ಗ್ರಾಮ ಪಂಚಾಯಿತಿ ಅಥವಾ ನಿರ್ವಹಣಾ ಗುತ್ತಿಗೆದಾರರು ಸದರಿ ಮೊತ್ತವನ್ನು ಬಳಸಿಕೊಂಡು ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ ಹಾಗೂ ವಿದ್ಯುತ್ ಬಿಲ್ ಪಾವತಿಗೆ ಬಳಸಬೇಕಾಗಿದೆ. ಪ್ರಸ್ತುತ ಸ್ಥಗಿತಗೊಂಡಿರುವ ಘಟಕಗಳನ್ನು ಅನುದಾನದ ಲಭ್ಯತೆಗೆ ಅನುಗುಣವಾಗಿ ದುರಸ್ತಿಗೊಳಿಸಲು ಕ್ರಮ ವಹಿಸಲಾಗುತ್ತಿದೆ.

ಕಡತ ಸಂಖ್ಯೆ: RDWSD / CE / TECH / 91 / 2025-26

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ
ತಂತ್ರಜ್ಞಾನ ಸಚಿವರು